# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023 ನೇ ಸಾಲಿನ ಬ್ಲಾಕ್ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 10 (ಇ) ಸೇನಿಸೇ 2021, ದಿನಾಂಕ:20/12/2021.

**ಪ್ರಸ್ತಾವನೆ:**

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118(2)(i) ರಲ್ಲಿ ಸರ್ಕಾರಿ ನೌಕರರು ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ (ಆಯಾ ವರ್ಷದ ಜನವರಿ 1 ರಿಂದ ಪ್ರಾರಂಭಗೊಂಡಂತೆ ಡಿಸೆಂಬರ್ 31 ರವರೆಗೆ) 15 ದಿನಗಳಿಗೆ ಮೀರದಂತೆ ಗಳಿಕೆ ರಜೆಯನ್ನು ಅಧ್ಯರ್ಪಿಸಲು ಮತ್ತು ರಜೆ ವೇತನಕ್ಕೆ ನಗದೀಕರಣ ಸೌಲಭ್ಯವನ್ನು ಪಡೆಯಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ 2022 ನೇ ಸಾಲಿನ ಬ್ಲಾಕ್ ಅವಧಿಗೆ ಸರ್ಕಾರಿ ಅಧಿಕಾರಿ ನೌಕರರು ಗಳಿಕೆ ರಜೆ ಅಧ್ಯರ್ಪಿಸಿ ನಗದೀಕರಣ ಪಡೆಯಲು ಅವಕಾಶ ಕಲ್ಪಿಸಲಾಗಿತ್ತು. ಸದರಿ ಬ್ಲಾಕ್ ಅವಧಿಯು ದಿನಾಂಕ:31/12/2022 ರಂದು ಮುಕ್ತಾಯಗೊಳ್ಳುವ ಹಿನ್ನೆಲೆಯಲ್ಲಿ ಸರ್ಕಾರವು 2023 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ 15 ದಿನ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜೆ ವೇತನಕ್ಕೆ ಸಮಾನವಾಗಿ ನಗದೀಕರಣ ಪಡೆಯುವ ಅವಕಾಶವನ್ನು ಕಲ್ಪಿಸಲು ಹಾಗೂ ಈ ಸೌಲಭ್ಯವನ್ನು ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗೊಳಪಟ್ಟು ನಿಯತಗೊಳಿಸಲು ಅವಕಾಶವನ್ನು ಕಲ್ಪಿಸಲು ಉದ್ದೇಶಿಸಿದೆ. ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆಇ 17(ಇ)ಸೇನಿಸೇ 2022 ಬೆಂಗಳೂರು, ದಿನಾಂಕ:17-12-2022**

ಸರ್ಕಾರವು 2023 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ ರಾಜ್ಯ ಸರ್ಕಾರಿ ನೌಕರರು ಗರಿಷ್ಟ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯುವ ಯೋಜನೆಯನ್ನು ಜಾರಿಗೊಳಿಸಿ ಆದೇಶಿಸಿದೆ.

ಎಲ್ಲಾ ವೃಂದದ ಅರ್ಹ ಅಧಿಕಾರಿ/ನೌಕರರು ಒಂದು ತಿಂಗಳ ಮುಂಚಿತ ನೋಟಿಸ್ ನೀಡಿ 01/01/2023 ರಿಂದ 31/12/2023 ರವರೆಗಿನ ಅವಧಿಯಲ್ಲಿ ಅವರ ಇಚ್ಛೆಯಂತೆ ಯಾವುದೇ ತಿಂಗಳಿನಲ್ಲಿ ಗಳಿಕೆ ರಜೆ ನಗದೀಕರಣದ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ.

ಗೆಜೆಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2023 ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ, ಹೆಚ್.ಆರ್.ಎಂ.ಎಸ್ ನಲ್ಲಿ ಲಭ್ಯವಿರುವ ಅಧಿಕಾರಿಗಳ ಗಳಿಕೆ ರಜೆ ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹವಾಗುವ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದ್ದು.

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ 118 ರಲ್ಲಿ ನಿಯಮಿಸಿರುವಂತಹ ಗಳಿಕೆ

- ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತವೆ. ಈ ಆದೇಶವು ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗೊಳಪಟ್ಟು ನಿಯತಗೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Signed by Ajay Korade
Date: 17-12-2022 16:02:50
(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)
ದೂ: 080-22033135

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

<u>ಪ್ರತಿ ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
7. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
8. ಎಲ್ಲಾ ಜಿಲ್ಲಾಧಿಕಾರಿಗಳು.
9. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗಾ
10. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.

17. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
23. ವಾರಪತ್ರ/ಶಾಖೆಯ ರಕ್ಷಾ ಕಡತ/Web portal.

[ಕ್ರಮ ಸಂಖ್ಯೆ: 1 ರಿಂದ 16 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ]

ಕರ್ನಾಟಕ ಸರಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.